RNU AIR DHARWAD

MARCH 13, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯದ ಒಟ್ಟು ನಾಲ್ಕು ಜಿಲ್ಲೆಗಳಲ್ಲಿ** ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮುದಾಯದವರಿಗೆ ವಸತಿ ಯೋಜನೆಯನ್ನು ಜಾರಿಗೆ ತರಲಾಗುತ್ತಿದೆ, ತುಮಕೂರು ಜಿಲ್ಲೆ, ಶಿರಾ ತಾಲೂಕಿನ ಲ್ಲಿ ಹೆಚ್ಚಿನ ಫಲಾನುಭವಿಗಳಿದ್ದು, ಮನೆ ನಿರ್ಮಾಣ ಕಾರ್ಯ ಶೀಘ್ರದಲ್ಲಿ ಆರಂಭಗೊಳ್ಳಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವರಾದ ಶಿವರಾಜ ತಂಗಡಗಿ ಹೇಳಿದರು. ವಿಧಾನಮಂಡಲ ಬಜೆಟ್ ಅಧಿವೇಶನದ, 6 ನೇ ದಿನವಾದ ಇಂದು, ವಿಧಾನ ಪರಿಷತ್ತಿನಲ್ಲಿ, ಸದಸ್ಯ ಎನ್. ರವಿಕುಮಾರ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ, ಸಚಿವರು, ತುಮಕೂರು, ಬೆಳಗಾವಿ, ಶಿವಮೊಗ್ಗ ಜಿಲ್ಲೆಗಳ ಅಲೆಮಾರಿ ಸಮುದಾಯಗಳ ಅರ್ಹ ಫಲಾನುಭವಿಗಳಿಗೆ ಸರ್ಕಾರದ ವತಿಯಿಂದ ಮನೆ ನಿರ್ಮಾಣಕ್ಕೆ ಸಹಾಯಧನ ಒದಗಿಸಲಾಗುತ್ತಿದೆ. ಬಾಗಲಕೋಟೆ ಜಿಲ್ಲೆಯಲ್ಲಿರುವ ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮುದಾಯಸ್ಥರ ಸಮೀಕ್ಷೆ ನಡೆಸಿ, ಫಲಾನುಭವಿಗಳನ್ನು ಗುರುತಿಸುವ ಕಾರ್ಯ ನಡೆಯಲಿದೆ ಎಂದರು.

<><><>

**ಧಾರವಾಡ ತಾಲೂಕು,** ಸುತಗಟ್ಟಿಯ, ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆ, ಟ್ರಿಪಲ್ ಐ.ಟಿ.ಯಲ್ಲಿ ಸ್ಥಾಪಿತ, ಕ್ವಾಂಟಮ್ ಕಂಪ್ಯೂಟಿಂಗ್ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ, ಕ್ವಿಟ್ ಕ್ವಾಂಟಮ್ ಕಂಪ್ಯೂಟರ್ ಅಳವಡಿಸಲಾಗಿದ್ದು, ಕರ್ನಾಟಕ, ಕ್ವಾಂಟಮ್ ತಂತ್ರಜ್ಞಾನ ನಾಯಕತ್ವ ನಿರ್ವಹಿಸುವಲ್ಲಿ, ಮಹತ್ವದ ಹೆಜ್ಜೆ ಇರಿಸಿದೆ ಎಂದು, ಮಾಹಿತಿ ತಂತ್ರಜ್ಞಾನ ಖಾತೆ ಸಚಿವ, ಪ್ರಿಯಾಂಕ ಖರ್ಗೆ, ಸಂತಸ ವ್ಯಕ್ತ ಪಡಿಸಿದ್ದಾರೆ. ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ, ಪ್ರಮುಖ ಸ್ಥಳೀಯ ಆರ್ಥಿಕ ವೇಗವರ್ಧನೆ ಕಾರ್ಯಕ್ರಮ, #LEAP ಅಡಿ, ಶೈಕ್ಷಣಿಕ ಹಾಗೂ ಔದ್ಯಮಿಕ ಕ್ಷೇತ್ರಗಳಿಗೆ, ಕ್ವಾಂಟಮ್ ಕಂಪ್ಯೂಟಿಂಗ್ ಸಾಮರ್ಥ್ಯ ನೀಡುತ್ತದೆ ಎಂದು, ಸಾಮಾಜಿಕ ಮಾಧ್ಯಮ, ಫೇಸ್‌ಬುಕ್ ನಲ್ಲಿ, ತಿಳಿಸಿದ್ದಾರೆ.

<><><>

**ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು** ನಾಳೆ, ಬಾಗಲಕೋಟೆ ಜಿಲ್ಲೆಗೆ ಭೇಟಿ ನೀಡಲಿದ್ದು, ಸರ್ಕಾರಿ ಮೆಡಿಕಲ್ ಕಾಲೇಜು ನಿರ್ಮಾಣ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಆರ್. ಬಿ.ತಿಮ್ಮಾಪುರ ತಿಳಿಸಿದ್ದಾರೆ. ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಜಿಲ್ಲೆಯ ಬಹುಕಾಲದ ಕನಸಾಗಿದ್ದ ಸರ್ಕಾರಿ ಮೆಡಿಕಲ್ ಕಾಲೇಜಿಗೆ ನಾಳೆ, ಬೆಳಗ್ಗೆ ಸುಮಾರು 11 ಗಂಟೆಗೆ ಸೆಕ್ಟರ್ ನಂ.1ರಲ್ಲಿ ಶಂಕುಸ್ಥಾಪನೆ ನೆರವೇರಲಿದೆ. ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಸೇರಿದಂತೆ ಸಚಿವ ಸಂಪುಟದ ಸದಸ್ಯರು ಪಾಲ್ಗೊಳ್ಳಲಿದ್ದಾರೆ ಎಂದರು.

<><><>

**ಆರ್ ಬಿ ತಿಮ್ಮಾಪುರ ಧ್ವನಿ 38 ಸೆಕೆಂದುಗಳು**

<><><>

**ಆದ್ಯತಾ ವಲಯಗಳ ಅಡಿ,** ಧಾರವಾಡ ಜಿಲ್ಲೆಗೆ, ರಾಷ್ಟ್ರೀಯ ಕೃಷಿ ಹಾಗೂ ಗ್ರಾಮೀಣಾಭಿವೃದ್ಧಿ ಬ್ಯಾಂಕ್ – ನಬಾರ್ಡ್ ದಿಂದ, 16 ಸಾವಿರದ 3 ನೂರಾ 42 ಕೋಟಿ, ಸಾಮರ್ಥ್ಯ ಆಧಾರಿತ, ಸಾಲ ಯೋಜನೆ ಅಂದಾಜಿಸಲಾಗಿದೆ. ಪ್ರಸಕ್ತ ಹಣಕಾಸು ವರ್ಷದ, Potential Linked Plan ಪುಸ್ತಕವನ್ನು, ಜಿಲ್ಲಾ ಪಂಚಾಯಿತಿ ಸಭಾಭವನದಲ್ಲಿ, ಬ್ಯಾಂಕರ್ಸ್ ಸಮಾಲೋಚನಾ ಸಭೆಯಲ್ಲಿ, ಜಿಲ್ಲಾ ಪಂಚಾಯಿತಿ ಸಿ.ಇ.ಓ. ಭುವನೇಶ ಪಾಟೀಲ, ಬಿಡುಗಡೆ ಮಾಡಿದರು.

<><><>

**ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ** ಅಂಗವಾಗಿ, ಬೆಂಗಳೂರಿನ ಸಂತಕವಿ ಕನಕದಾಸ ಮತ್ತು ತತ್ವಪದಕಾರ ಅಧ್ಯಯನ ಕೇಂದ್ರ, ಕರ್ನಾಟಕ ಲೇಖಕಿಯರ ಸಂಘ ಹಾಗೂ ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಕನಕ ಅಧ್ಯಯನ ಪೀಠದ ಸಹಯೋಗದಲ್ಲಿ ವಿಶ್ವವಿದ್ಯಾಲಯದ ಕನಕ ಸಭಾಭವನದಲ್ಲಿ, ಇಂದು ಮತ್ತು ನಾಳೆ ಸಾಧಕಿ ಮಹಿಳಾ ಚಿಂತನಾ ಸಮಾವೇಶ ಆಯೋಜಿತವಾಗಿದೆ.

<><><>

**ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ,** ಪಂಡಿತ ಶಂಕ್ರಪ್ಪ ಹೂಗಾರ ಅವರ 41 ನೇ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮ, ಇಂದು ಸಂಜೆ 5 ಗಂಟೆಗೆ ಧಾರವಾಡದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿತವಾಗಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

<><><>

**ಬಳ್ಳಾರಿ ಜಿಲ್ಲೆಯ ಹಿರಿಯ ರಂಗ ಕಲಾವಿದ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ವಿಜೇತರಾದ,** ರಮೇಶ ಗೌಡ ಪಾಟೀಲ್ ಇಂದು ಬೆಳಗಿನ ಜಾವ ನಿಧನರಾದರು, ಅವರಿಗೆ 78 ವರ್ಷ ವಯಸ್ಸಾಗಿತ್ತು. ಡಾಕ್ಟರ ಜೋಳದ ರಾಶಿ ದೊಡ್ಡನಗೌಡರ 'ಸಾಯದವನ ಸಮಾಧಿ' ನಾಟಕದಲ್ಲಿನ ಅಭಿನಯ ಅವರ ಕಲಾ ಬದುಕಿನ ಕೊನೆಯ ರಂಗ ಪ್ರಯೋಗವಾಗಿತ್ತು. ಪಾರ್ಥಿವ ಶರೀರದ ಅಂತ್ಯಕ್ರಿಯೆ ನಗರದ ವೀರಶೈವ ರುದ್ರಭೂಮಿಯಲ್ಲಿ ಇಂದು ಸಂಜೆ 3.30 ಕ್ಕೆ ನೆರವೇರಲಿದೆ.

<><><>

**ಯಾದಗಿರಿ ನಗರದ ಹೊಟೇಲ್,** ರೆಸ್ಟೋರೆಂಟ್, ಖಾನಾವಳಿ ಹಾಗೂ ಚಹಾ ಅಂಗಡಿಗಳಲ್ಲಿ ಅಕ್ರಮವಾಗಿ ಬಳಸಲಾಗುತ್ತಿದ್ದ, 45 ಗೃಹ ಬಳಕೆ ಗ್ಯಾಸ್ ಸಿಲಿಂಡರ್ ಗಳನ್ನು ಅಧಿಕಾರಿಗಳು ತಮ್ಮ ವಶಕ್ಕೆ ಪಡೆದುಕೊಂಡಿದ್ದಾರೆ. ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಉಪ ನಿರ್ದೇಶಕರು ಹಾಗೂ ತೆಹಶೀಲ್ದಾರ ಸುರೇಶ್ ಅಂಕಲಗಿ ಸೇರಿದಂತೆ ಅಧಿಕಾರಿಗಳ ತಂಡ ನಗರದ, ಜಿಲ್ಲಾಧಿಕಾರಿ ಕಚೇರಿ ಮುಂಭಾಗದ, ಚಿತ್ತಾಪುರ ರಸ್ತೆ, ನೇತಾಜಿ ವೃತ್ತ ಸೇರಿದಂತೆ ಹಲವೆಡೆ ಪರಶೀಲನೆ ಕೈಗೊಂಡಿತು. ಅಕ್ರಮ ಗ್ಯಾಸ್ ಸಿಲಿಂಡರ್ ಬಳಕೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಲು ಅಧಿಕಾರಿಗಳು ಮುಂದಾಗಿದ್ದಾರೆ.

<><><>

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>